ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪ್ರಶಸ್ತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 5/2/2020

# ಪಂಪ ಪ್ರಶಸ್ತಿಗೆ ಡಾ.ಸಿದ್ದಲಿಂಗಯ್ಯ ಆಯ್ಕೆ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಕರ್ನಾಟಕ ಸರ್ಕಾರ ನೀಡುವ ಪಂಪ ಪ್ರಶಸ್ತಿಗೆ ಕವಿ ಡಾ. ಸಿದ್ದಲಿಂಗಯ್ಯ ಆಯ್ಕೆಯಾಗಿದ್ದಾರೆ. ಪ್ರಶಸ್ತಿ 5 ಲಕ್ಷ ನಗದು ಜತೆಗೆ ಪಾರಿತೋಷಕ ಒಳಗೊಂಡಿರುತ್ತದೆ. ಪ್ರಶಸ್ತಿಯನ್ನು ಫೆ.8 ರಂದು ಬನವಾಸಿಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ.

ಮಲ್ಲೇಪುರಂ ಜಿ. ವೆಂಕಟೇಶ್ ನೇತೃತ್ವದ ಆಯ್ಕೆ ಸಮಿತಿ ಸಿದ್ದಲಿಂಗಯ್ಯ ಅವರನ್ನು ಪಂಪ ಪ್ರಶಸ್ತಿಗೆ ಆಯ್ಕೆ ಮಾಡಿದೆ. ಸಿದ್ದಲಿಂಗಯ್ಯ ಬುದ್ಧ, ಬಸವಣ್ಣ, ಅಂಬೇಡ್ಕರ್, ದ್ರಾವಿಡ ಚಳವಳಿ ಪಿತಾಮಹ ಪೆರಿಯಾರ್ ಬರಹ ಮತ್ತು ಸಿದ್ಧಾಂತಗಳಿಂದ ಪ್ರೇರಿತರಾಗಿದ್ದವರು. ದಲಿತ ಕವಿ' ಎಂದೇ ಪ್ರಸಿದ್ಧರಾದ ಸಿದ್ದಲಿಂಗಯ್ಯ, ದಲಿತ ಹೋರಾಟ ಮತ್ತು ಸಾಮಾಜಿಕ ಸಮಾನತೆಗಾಗಿ ಕಾವ್ಯ ರಚಿಸಿದವರು. ಕಾವ್ಯ, ನಾಟಕ, ಪ್ರಬಂಧ, ವಿಮರ್ಶೆ, ಸಂಶೋಧನೆ, ಆತ್ಮಕಥನ ಮುಂತಾದ ಪ್ರಕಾರಗಳಲ್ಲಿ ಸಾಹಿತ್ಯ ರಚನೆ ಮಾಡಿದ್ದಾರೆ. 2 ಬಾರಿ ವಿಧಾನಪರಿಷತ್ತಿನ ಸದಸ್ಯರಾಗಿದ್ದರು. ಅಧ್ಯಾಪನ - ಬರವಣಿಗೆಗಳಲ್ಲಿ ತೊಡಗಿಕೊಂಡಿರುವವರು.

**ಜನನ, ಜೀವನ:** ಸಿದ್ದಲಿಂಗಯ್ಯ ಬೆಂಗಳೂರು ಗ್ರಾಮಾಂತರ ಜಿಲ್ಲೆ ಮಾಗಡಿ ತಾಲೂಕಿನ ಮಂಚನಬೆಲೆ ಗ್ರಾಮದಲ್ಲಿ 1954ರಲ್ಲಿ ಜನಿಸಿದರು. ತಂದೆ ದೇವಯ್ಯ, ತಾಯಿ ವೆಂಕಮ್ಮ. ಮಲ್ಲೇಶ್ವರಂನ ಸರಕಾರಿ ಪ್ರೌಢಶಾಲೆ ಇವರ ವಿದ್ಯಾಕೇಂದ್ರವಾಗಿತ್ತು. ಆ ವೇಳೆಗಾಗಲೇ ಕವಿತೆ ಬರೆವ ಅಭ್ಯಾಸ ಇವರಿಗಿತ್ತು. ವಿದ್ಯಾರ್ಥಿದೆಸೆಯಲ್ಲಿಯೇ ಇವರು ಉತ್ತಮ ಭಾಷಣಕಾರರಾಗಿದ್ದರು. ಅಂಬೇಡ್ಕರ್, ಪೆರಿಯಾರ್, ವಸುದೇವಭೂಪಾಲ, ಲೋಹಿಯಾ ಮುಂತಾದವರ ವಿಚಾರಧಾರೆಗಳಿಂದ ಆಕರ್ಷಿತರಾಗಿದ್ದರು.

**ಕೃತಿಗಳು:** ಪಿಎಚ್.ಡಿ ಸಂಶೋಧನಾ ಪ್ರಬಂಧ, ಗ್ರಾಮ ದೇವತೆಗಳು, ಕವನ ಸಂಕಲನಗಳು, ಹೊಲೆ ಮಾದಿಗರ ಹಾಡು, ಮೆರವಣಿಗೆ, ಸಾವಿರಾರು ನದಿಗಳು, ಕಪ್ಪು ಕಾಡಿನ ಹಾಡು, ಆಯ್ದ ಕವಿತೆಗಳು, ಅಲ್ಲೆ ಕುಂತವರೆ. ನನ್ನ ಜನಗಳು ಮತ್ತು ಇತರ ಕವಿತೆಗಳು, ಸಮಕಾಲೀನ ಕನ್ನಡ ಕವಿತೆ ಭಾಗ-3,4 (ಸಂಪಾದನೆ ಇತರರೊಂದಿಗೆ) ವಿಮರ್ಶನಾ ಕೃತಿಗಳು; ಹಕ್ಕಿ ನೋಟ, ರಸಗಳಿಗೆಗಳು, ಎಡಬಲ ಉರಿಕೆಂಡಾಯ, ಲೇಖನಗಳ ಸಂಕಲನ ಅವತಾರಗಳು, ಸದನದಲ್ಲಿ ಸಿದ್ದಲಿಂಗಯ್ಯ ಭಾಗ 1 ಮತ್ತು2 ಸದನದಲ್ಲಿ ಸಿದ್ದಲಿಂಗಯ್ಯ ಭಾಗ -2, ಜನಸಂಸ್ಕೃತಿ.

**ನಾಟಕಗಳು:** ಏಕಲವ್ಯ, ನೆಲಸಮ, ಪಂಚಮ, ಆತ್ಮಕಥೆ ಊರುಕೇರಿ-ಭಾಗ-1 ಮತ್ತು 2

**ಗೌರವ, ಪ್ರಶಸ್ತಿಗಳು:** ಉತ್ತಮ ಚಲನಚಿತ್ರ ಗೀತೆ ರಚನೆಗಾಗಿ ಕರ್ನಾಟಕ ಸರಕಾರ ಪ್ರಶಸ್ತಿ-1984, ರಾಜ್ಯೋತ್ಸವ ಪ್ರಶಸ್ತಿ -ಕರ್ನಾಟಕ ಸರಕಾರ-1986, ಡಾ. ಅಂಬೇಡ್ಕರ್ ಶತಮಾನೋತ್ಸವ ವಿಶೇಷ ಪ್ರಶಸ್ತಿ -1992, ಕರ್ನಾಟಕ ಸಾಹಿತ್ಯ ಅಕಾಡೆಮಿ ಗೌರವ ಪ್ರಶಸ್ತಿ -1996, ಜಾನಪದ ತಜ್ಞ ಪ್ರಶಸ್ತಿ -2001, 2ಬಾರಿ ಕರ್ನಾಟಕ ರಾಜ್ಯ ವಿಧಾನ ಪರಿಷತ್ ಸದಸ್ಯ, ಸಂದೇಶ್ ಪ್ರಶಸ್ತಿ, ಡಾ. ಅಂಬೇಡ್ಕರ್ ಪ್ರಶಸ್ತಿ -2002, ಸತ್ಯಕಾಮ ಪ್ರತಿಷ್ಠಾನ ಪ್ರಶಸ್ತಿ -2002, ಬಾಬುಜಗಜೀವನರಾಮ್ ಪ್ರಶಸ್ತಿ -2005, ನಾಡೋಜ ಪ್ರಶಸ್ತಿ -2007, ಪ್ರೆಸಿಡೆನ್ಸಿ ಇನ್ಸ್ಟಿಟ್ಯೂಷನ್ ಪ್ರಶಸ್ತಿ -2012, ಆಳ್ವಾಸ್ ನುಡಿಸಿರಿ ಪ್ರಶಸ್ತಿ -2012, ಶ್ರವಣಬೆಳಗೊಳದಲ್ಲಿ ನಡೆದ 81ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರು. ನೃಪತುಂಗ ಪ್ರಶಸ್ತಿ -2018.